ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/84/ಶೈ.ಗು/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:20.06.2017.

# ಸುತ್ತೋಲೆ

**ವಿಷಯ:** ಸ್ಥಳೀಯ ಕೈಗಾರಿಕೋದ್ಯಮಿಗಳನ್ನು ಕಾಲೇಜಿನ/ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಪ್ರೇರೇಪಿಸುವ ಬಗ್ಗೆ.

* * * * * * *

ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಟ್ಟಡ, ಪೀಠೋಪಕರಣ ವ್ಯವಸ್ಥೆ, ಗ್ರಂಥಾಲಯ ವ್ಯವಸ್ಥೆ ಇವುಗಳ ಸಂಬಂಧ ಸಂಪನ್ಮೂಲ ಸಂಗ್ರಹಣೆ ಹಾಗೂ ಇನ್ನಿತರ ರಚನಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದಲ್ಲದೇ, ಕಾಲೇಜಿನ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಲು ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ವಿವಿಧ ಕ್ಷೇತ್ರಗಳ ಗಣ್ಯರನ್ನು ಸದಸ್ಯರನ್ನಾಗಿ ಮಾಡಿ ಕಾಲೇಜು ಅಭಿವೃದ್ಧಿ ಸಮಿತಿಯನ್ನು ರಚಿಸಲಾಗಿರುತ್ತದೆ. ಅದರಂತೆ, ಮೂವರು ಸ್ಥಳೀಯ ಕೈಗಾರಿಕೋದ್ಯಮಿಗಳು ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರುಗಳಾಗಿರುತ್ತಾರೆ. ಸದರಿ ಅನುಭವಿ ಹಾಗೂ ಪರಿಣಿತ ಕೈಗಾರಿಕೋದ್ಯಮಿಗಳು ಕಾಲೇಜು ಅಭಿವೃದ್ಧಿ ಸಮಿತಿ ಸಭೆಗಳಲ್ಲಿ ಹಾಜರಾಗುವುದಕ್ಕೆ ಮಾತ್ರ ಸೀಮಿತವಾಗದೇ, ಕಾಲೇಜಿನ / ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗಾಗಿ ಹೆಚ್ಚಿನ ಸಹಕಾರ ನೀಡುವಂತೆ ಹಾಗೂ ಸಕ್ರಿಯವಾಗಿ ತೊಡಗುವಂತೆ ಪ್ರೇರೇಪಿಸುವುದು ಅತ್ಯಗತ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ಕೆಳಕಂಡ ಅಂಶಗಳನ್ನು ಪಾಲಿಸುವಂತೆ ಪ್ರಾಂಶುಪಾಲರುಗಳಿಗೆ ಈ ಮೂಲಕ ಸೂಚನೆ ನೀಡಲಾಗಿದೆ.

- ಸ್ಥಳೀಯ ಕೈಗಾರಿಕೋದ್ಯಮಿಗಳೊಂದಿಗೆ ಉತ್ತಮ ಬಾಂಧವ್ಯವನ್ನು ಇಟ್ಟುಕೊಂಡು, ಅವರುಗಳು ಕಾಲೇಜಿನ ಪ್ರಗತಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಸಹಕಾರ ಕೋರುವುದು.
- ಕಾಲೇಜಿನ ಅಭಿವೃದ್ಧಿಗೆ ಅವಶ್ಯಕವಾದ ಪೂರಕ ಅಂಶಗಳ ಬಗ್ಗೆ, ಕಾಲೇಜು ಎದುರಿಸುತ್ತಿರುವ ಶೈಕ್ಷಣಿಕ / ಆಡಳಿತಾತ್ಮಕ ಸಮಸ್ಯೆಗಳ ಬಗ್ಗೆ ಕೈಗಾರಿಕೋದ್ಯಮಿಗಳೊಂದಿಗೆ ಸದಾ ಸಂಪರ್ಕದಲ್ಲಿದ್ದು, ಚರ್ಚಿಸಿ, ಪರಿಹಾರ ಕಂಡುಕೊಳ್ಳುವತ್ತ ಸಹಕಾರ ಪಡೆದುಕೊಳ್ಳುವುದು.
- ಕೈಗಾರಿಕೆಗಳ ಸ್ಥಾಪನೆ ಮತ್ತು ಅಭಿವೃದ್ಧಿಗೆ ಪೂರಕವಾದ ಅಂಶಗಳು, ಕೈಗಾರಿಕಾ ಅಭಿವೃದ್ಧಿಯ ಮಹತ್ವ, ಕೈಗಾರಿಕೆಗಳಿಂದ ಸೃಷ್ಟಿಯಾಗುವ ಉದ್ಯೋಗಾವಕಾಶಗಳು, ಮತ್ತಿತರೆ ವಿಷಯಗಳ ಬಗ್ಗೆ ಅನುಭವಿ ಕೈಗಾರಿಕೋದ್ಯಮಿಗಳಿಂದ ಸಂವಾದ ಕಾರ್ಯಕ್ರಮಗಳನ್ನು ನಡೆಸಿ, ವಿದ್ಯಾರ್ಥಿಗಳಿಗೆ ಮಾಹಿತಿ ದೊರೆಯುವಂತೆ ಅಗತ್ಯ ಕ್ರಮ ಕೈಗೊಳ್ಳುವುದು.
- ಪ್ರತ್ಯೇಕ ಬಿಡುವಿನ ವೇಳೆಯಲ್ಲಿ ತಮ್ಮ ಅನುಭವಗಳನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಳ್ಳುವಂತೆ ಕೈಗಾರಿಕೋದ್ಯಮಿಗಳನ್ನು ಕೋರುವುದು.
- ಸ್ವಂತ ಉದ್ಯೋಗ ಕೈಗೊಳ್ಳಲು ವಿದ್ಯಾರ್ಥಿಗಳನ್ನು ಪ್ರೇರೇಪಿಸುವ ನಿಟ್ಟಿನಲ್ಲಿ ಕೈಗಾರಿಕೋದ್ಯಮಗಳ ಘಟಕಗಳಿಗೆ ವಿದ್ಯಾರ್ಥಿಗಳು ಭೇಟಿ ನೀಡಲು ಅವಕಾಶ ನೀಡುವಂತೆ ಮತ್ತು ಆ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಕೈಗಾರಿಕೆಗಳ ಸ್ಥಾಪನೆಯ ಅನುಭವ/ಮಾಹಿತಿ ನೀಡುವಂತೆ ಕೋರುವುದು.
- ತಮ್ಮ ಕೈಗಾರಿಕೋದ್ಯಮ ಘಟಕಗಳಲ್ಲಿ ಅರ್ಹ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶ ನೀಡಿ, ಅವರುಗಳ ಆರ್ಥಿಕ ಸ್ಥಿರತೆಗೆ ಸಹಕರಿಸುವಂತೆ ಸದಸ್ಯ ಕೈಗಾರಿಕೋದ್ಯಮಿಗಳಿಗೆ ಕೋರುವುದು.

**ಕಾಲೇಜು ಶಿಕ್ಷಣ ಆಯುಕ್ತರು**

**ಇವರಿಗೆ:**

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2. ಇಲಾಖೆ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4. ಕಛೇರಿ ಪ್ರತಿ.